**CC 1321/2023**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ವಿಜಯನಗರ ಜಿಲ್ಲೆ, ಹೊಸಪೇಟೆ.**

**ಸಿಸಿ ನಂಬರ್** 1321/2023

**ಸಿ ಡಬ್ಲೂ -8**
**ಪಿ ಡಬ್ಲೂ -6**

| | |
|---|---|
| **ಸಾಕ್ಷಿಯ ಹೆಸರು -** | **ಮೊಹಮ್ಮದ್ ಅಲಿ** |
| **ತಂದೆಯ ಹೆಸರು -** | **ಖಾಜಾ ಸಾಬ್** |
| **ವಯಸ್ಸು -** | 47 **ವರ್ಷಗಳು** |
| **ಉದ್ಯೋಗ -** | **ಖಾಸಗಿ ಕೆಲಸ** |
| **ವಾಸಸ್ಥಳ -** | **ಕಡ್ಡಿರಾಂಪುರ** |

**ಸಾಕ್ಷಿಯನ್ನು ದಿನಾಂಕಃ** 06-03-2026 **ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎ. ಪಿ. ಪಿ. ಅವರಿಂದ**

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿನ ಸಹಿ ನನ್ನದೇ ಆಗಿರುತ್ತದೆ. ಸಾಕ್ಷಿ ಜಪ್ತು ಪಂಚನಾಮೆಯಲ್ಲಿನ ಸಹಿ ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಈಗಾಗಲೇ ನಿಪಿಃ **4** ಎಂದು ಗುರುತಿಸಲಾಗಿದೆ, ಸಾಕ್ಷಿಯ ಸಹಿಯನ್ನು ನಿಪಿಃ **4(**ಸಿ**)** ಎಂದು ಗುರುತಿಸಲಾಯಿತು.

ಸದರಿ ಸಹಿಯನ್ನು **2022** ರಲ್ಲಿ ಹಂಪಿ ಪೋಲಿಸ್ ಠಾಣೆಯಲ್ಲಿ ಮಾಡಿರುತ್ತೇನೆ. ಪೋಲಿಸರು ನನ್ನನ್ನು ಕರೆದು ಸಹಿ ಮಾಡು ಎಂದಿದ್ದರಿಂದ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಆಗಿಲ್ಲ ಮತ್ತು ಯಾವುದೇ ವಸ್ತು ಜಪ್ತುಪಡಿಸಿಕೊಂಡಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಮಾನ್ಯ ಎ.ಪಿ.ಪಿ. ಅವರು ಅನುಮತಿ ಕೇಳಿದ್ದು, ಅನುಮತಿಯನ್ನು ನೀಡಲಾಯಿತು.)**

**CC 1321/2023**

**<u>ಪಾಟೀ ಸವಾಲು ಮಾನ್ಯ ಎ ಪಿ ಪಿ ಅವರಿಂದಃ</u>**

ದಿಃ 21-09-2022 ರಂದು ಹಂಪಿ ಪೋಲಿಸರು ನನ್ನನ್ನು ಮತ್ತು ಚಾಸಾ -7 ರವರನ್ನು ಠಾಣೆಗೆ ಕರೆಯಿಸಿ ಪ್ರಕರಣದ ಬಗೆಗ ಮಾಹಿತಿ ನೀಡಿದ್ದರು ಅಂದರೆ ಸರಿಯಲ್ಲ. ಆಗ ಚಾಸಾ -1 ರವರು ಆಗಲೇ ಜಪ್ತು ಮಾಡಿಕೊಂಡು ತಂದಿದ್ದ ಹೋಲಿಕೆ ಮಾಡುವ ಸಲುವಾಗಿ ತೆಗೆದಿರಿಸಿದ್ದ 1 ಕೆಜಿ ಪಡಿತರ ಅಕ್ಕಿಯನ್ನು ತನಿಖಾಧಿಕಾರಿಯ ಮುಂದೆ ನಮ್ಮ ಸಮಕ್ಷಮ ಹಾಜರು ಪಡಿಸಿದ್ದರು ಅಂದರೆ ಸರಿಯಲ್ಲ. ಸದರಿ ಅಕ್ಕಿಯನ್ನು ನಿಪಿಃ 4 ರ ಪಂಚನಾಮೆ ಅಡಿಯಲ್ಲಿ ಜಪುತ ಪಡಿಸಿಕೊಳ್ಳಲಾಗಿತ್ತು ಅಂದರೆ ಸರಿಯಲ್ಲ. ಮುದ್ದೆಮಾಲು -2 ಸದರಿ ಮಾದರಿ ಅಕ್ಕಿ ಇದ್ದ ಚೀಲವಾಗಿರುತ್ತದೆ ಅಂದರೆ ಸರಿಯಲ್ಲ. ನನ್ನ ಸಮಕ್ಷಮ ನಿಪಿಃ 4 ರಂತೆ ಜಪುತ ಪಂಚನಾಮೆ ಆಗಿದ್ದರು ೌ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

<u>**ಪಾಟೀ ಸವಾಲು ಆರೋಪಿ ಪರ ಶ್ರೀ ಎನ್ ಎಸ್ ಎಚ್ ವಕೀಲರಿಂದಃ** ಇಲ್ಲಾ.</u>

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ವಿಜಯನಗರ ಜಿಲ್ಲೆ, ಹೊಸಪೇಟೆ.